ರಾಮದೇವ್ 'ಭೇಷರತ್ ಕ್ಷಮೆ' ತಿರಸ್ಕರಿಸಿದ 'ಸುಪ್ರೀಂ', ಕೇಂದ್ರ ಸರ್ಕಾರಕ್ಕೂ ತರಾಟೆ

ನವದೆಹಲಿ: ಪತಂಜಲಿ ಸಂಸ್ಥೆಯ ಹಾದಿ ತಪ್ಪಿಸುವ ಜಾಹಿರಾತು ಪ್ರಕರಣಕ್ಕೆ ಸಂಬಂಧಿಸಿದಂತೆ ಯೋಗ ಗುರು ಬಾಬಾ ರಾಮ್ ದೇವ್ ಸುಪ್ರೀಂ ಕೋರ್ಟ್ ಮತ್ತೊಂದು ಶಾಕ್ ನೀಡಿದ್ದು, ರಾಮದೇವ್ ಸಲ್ಲಿಸಿದ್ದ 'ಭೇಷರತ್ ಕ್ಷಮೆ'ಯನ್ನು ತಿರಸ್ಕರಿಸಿ ಕೇಂದ್ರ ಸರ್ಕಾರವನ್ನೂ ತರಾಟೆಗೆ ತೆಗೆದುಕೊಂಡಿದೆ

ಪತಂಜಲಿ ಸಂಸ್ಥಾಪಕರಾದ ರಾಮ್‌ದೇವ್ ಮತ್ತು ಬಾಲಕೃಷ್ಣ ಅವರು ಸಲ್ಲಿಸಿದ ಮತ್ತೊಂದು ಕ್ಷಮೆಯನ್ನು ತಿರಸ್ಕರಿಸಿದ ಸುಪ್ರೀಂ ಕೋರ್ಟ್ "ನಾವೇನೂ ಕುರುಡರಲ್ಲ".. ಈ ಪ್ರಕರಣದಲ್ಲಿ "ಉದಾರವಾಗಿರಲು ನಾವು ಬಯಸುವುದಿಲ್ಲ" ಎಂದು ಹೇಳಿ ಕ್ಷಮೆಯನ್ನು ತಿರಸ್ಕರಿಸಿದೆ.

ಅಲ್ಲದೆ ಈ ವಿಚಾರದಲ್ಲಿ ಕೇಂದ್ರ ಸರ್ಕಾರದ ಉತ್ತರದಿಂದಲೂ ಸರ್ವೋಚ್ಚ ನ್ಯಾಯಾಲಯ ತೃಪ್ತವಾಗಿಲ್ಲ ಎಂದು ನ್ಯಾಯಾಲಯ ಸರ್ಕಾರವನ್ನು ತರಾಟೆಗೆ ತೆಗೆದುಕೊಂಡಿದೆ.

"ಕ್ಷಮಾಪಣೆಯು ಕಾಗದದ ಮೇಲಿದೆ. ಅವರ ಬೆನ್ನು ಗೋಡೆಗೆ ವಿರುದ್ಧವಾಗಿದೆ. ನಾವು ಇದನ್ನು ಒಪ್ಪಿಕೊಳ್ಳಲು ನಿರಾಕರಿಸುತ್ತೇವೆ, ನಾವು ಇದನ್ನು ಉದ್ದೇಶಪೂರ್ವಕ ಉಲ್ಲಂಘನೆ ಎಂದು ಪರಿಗಣಿಸುತ್ತೇವೆ" ಎಂದು ನ್ಯಾಯಮೂರ್ತಿ ಹಿಮಾ ಕೊಹ್ಲಿ ಮತ್ತು ನ್ಯಾಯಮೂರ್ತಿ ಎ ಅಮಾನುಲ್ಲಾ ಅವರ ಪೀಠ ಹೇಳಿದೆ.

ವಿಚಾರಣೆಯ ಆರಂಭದಲ್ಲಿ, ರಾಮ್‌ದೇವ್ ಮತ್ತು ಬಾಲಕೃಷ್ಣ ಅವರು ಮೊದಲು ಮಾಧ್ಯಮಗಳಲ್ಲಿ ಕ್ಷಮೆಯಾಚಿಸಿದರು ಎಂದು ಪೀಠವು ಗಮನಿಸಿದ್ದು, "ವಿಷಯವು ನ್ಯಾಯಾಲಯದ ಮೆಟ್ಟಿಲೇರುವವರೆಗೂ, ನಮಗೆ ಅಫಿಡವಿಟ್‌ಗಳನ್ನು ಕಳುಹಿಸದೇ ಇರುವುದು ಕಂಡುಬಂದಿದೆ. ಅವರು ಅದನ್ನು ಮೊದಲು ಮಾಧ್ಯಮಗಳಲ್ಲಿ ಕ್ಷಮೆ ಕೇಳಿದ್ದಾರೆ. ನಿನ್ನೆ ಸಂಜೆ 7.30 ರವರೆಗೆ ಅದನ್ನು ನಮಗೆ ಅಪ್‌ಲೋಡ್ ಮಾಡಿಲ್ಲ. ಇದು ಅವರ ಪ್ರಚಾರದ ಗಿಮಿಕ್ ಎಂಬುದು ಸ್ಪಷ್ಟವಾಗಿದೆ" ಎಂದು ನ್ಯಾಯಮೂರ್ತಿ ಕೊಹ್ಲಿ ಹೇಳಿದರು.

ಪತಂಜಲಿ ಸಂಸ್ಥಾಪಕರ ಪರ ವಾದ ಮಂಡಿಸಿದ ಹಿರಿಯ ವಕೀಲ ಮುಕುಲ್ ರೋಹಟಗಿ ಅವರು ನೋಂದಾವಣೆ ಪರವಾಗಿ ಮಾತನಾಡಲು ಸಾಧ್ಯವಿಲ್ಲ ಮತ್ತು ಕ್ಷಮೆ ಕೇಳಲಾಗಿದೆ ಎಂದು ಹೇಳಿದರು. ಅಫಿಡವಿಟ್‌ಗಳನ್ನು ಓದುತ್ತಿದ್ದಂತೆ ನ್ಯಾಯಮೂರ್ತಿ ಅಮಾನುಲ್ಲಾ ಅವರು, "ನೀವು ಅಫಿಡವಿಟ್ ಅಲ್ಲಿಯೂ ವಂಚಿಸುತ್ತಿದ್ದೀರಿ, ಯಾರು ಈ ಅಫಿಡವಿಟ್ ಬರೆಗಿಣಟಿಜಜಜುಟಿಜಜದ್ದು, ನಮಗೆ ಆಶ್ಚರ್ಯವಾಗಿದೆ". ಕ್ಷಮೆಯಾಚನೆಯು "ಹೃದಯಪೂರ್ವಕವಾಗಿದೆಯೇ" ಎಂದು ಕೇಳಿದರು.

"ಇನ್ನೇನು ಹೇಳಬೇಕು, ನನ್ನ ಪ್ರಭುಗಳೇ, ನೀವು ಹೇಳಿದಂತೆ ನಾವು ಮಾಡುತ್ತೇವೆ ಎಂದು ರೋಹಟಗಿ ಉತ್ತರಿಸಿದರು. ಇದಕ್ಕೆ ಪ್ರತಿಕ್ರಿಯಿಸಿದ ಪೀಠ "ನಮ್ಮ ಆದೇಶದ ನಂತರವೂ ನೀವು ಕ್ಷಮೆ ಕೇಳಿಲ್ಲ. ಈ ಪ್ರಕರಣದಲ್ಲಿ ನಾವು ತುಂಬಾ ಉದಾರವಾಗಿರಲು ಬಯಸುವುದಿಲ್ಲ. ಸಮಾಜಕ್ಕೆ ಒಂದು ಸಂದೇಶ ಹೋಗಬೇಕಾಗಿದೆ. ಇದು ಕೇವಲ ಒಂದು ಎಫ್‌ಎಂಸಿಜಿ ಸಂಸ್ಥೆಯ ಬಗ್ಗೆ ಅಲ್ಲ. ಆದರೆ ಗಂಭೀರವಾಗಿ ಕಾನೂನಿನ ಉಲ್ಲಂಘನೆಯಾಗಿದೆ ಎಂದು ಅಭಿಪ್ರಾಯಪಟ್ಟಿದೆ.

ವಾಹನಗಳಿಗೆ 'Fancy Number'ಅರ್ಜಿ ಆಹ್ವಾನ; ಏಪ್ರಿಲ್ 18ರಂದು ಹರಾಜು

ಬೆಂಗಳೂರು: ಫ್ಯಾನ್ಸಿ ನಂಬರ್‌ಗಳ ಹರಾಜಿನ ಮೂಲಕ ಅಧಿಕ ಆದಾಯ ಗಳಿಸುತ್ತಿರುವ ರಾಜ್ಯ ಸಾರಿಗೆ ಇಲಾಖೆಯು 'ಕೆಎ 50 ಎಂಡಿ' ಸರಣಿಗೆ ಅರ್ಜಿ ಆಹ್ವಾನಿಸಿದೆ. ಏಪ್ರಿಲ್ 18ರಂದು ಹರಾಜು ಆರಂಭವಾಗಲಿದೆ. ಈ ಬಾರಿ ಕೂಡ ಸಾರಿಗೆ ಇಲಾಖೆ ಲಕ್ಷಾಂತರ ರೂಪಾಯಿ ಆದಾಯ ಗಳಿಸುವ ನಿರೀಕ್ಷೆ ಇದೆ.

ಸಾರಿಗೆ ಇಲಾಖೆಯು ಕರ್ನಾಟಕ ಮೋಟಾರು ವಾಹನ ನಿಯಮಗಳು, 1989 ರ ನಿಯಮ 46 (ಎಎ) 1 ರಿಂದ 999 ರ ನಡುವಿನ ಲಘು ಮೋಟಾರು ವಾಹನಗಳಿಗೆ ಫ್ಯಾನ್ಸಿ ನೋಂದಣಿ ಸಂಖ್ಯೆಗಳನ್ನು ಹಂಚಿಕೆ ಮಾಡಲು ಸಾರ್ವಜನಿಕರಿಂದ ಅರ್ಜಿಗಳನ್ನು ಆಹ್ವಾನಿಸುತ್ತದೆ.

ಈ ಬಾರಿ 'ಕೆಎ 50 ಎಂಡಿ' ಸರಣಿಯ ಹರಾಜು ಪ್ರಕ್ರಿಯೆಯು ಏ.18ರಂದು ಮಧ್ಯಾಹ್ನ 12 ಗಂಟೆಗೆ ಶಾಂತಿನಗರದ ಸಾರಿಗೆ ಆಯುಕ್ತರ ಕಚೇರಿಯಲ್ಲಿ ನಡೆಯಲಿದೆ. ಆಸಕ್ತರು ಕಾರ್ಯದರ್ಶಿ, ರಾಜ್ಯ ಸಾರಿಗೆ ಪ್ರಾಧಿಕಾರ, ಬೆಂಗಳೂರು. ಈ ಹೆಸರಿನಲ್ಲಿ 75,000 ರೂ. ಡಿಮ್ಯಾಂಡ್ ಡ್ರಾಫ್ಟ್‌ನೊಂದಿಗೆ ಅರ್ಜಿಯನ್ನು ಸಲ್ಲಿಸಬಹುದು. ಅರ್ಜಿ ಜೊತೆ ಡಿಡಿಯನ್ನು ಏಪ್ರಿಲ್ 18ರ ಮಧ್ಯಾಹ್ನ 12 ಗಂಟೆಯೊಳಗೆ ಸಲ್ಲಿಸಬೇಕು.

ಅರ್ಜಿದಾರರಿಗೆ ಟೋಕನ್ ನೀಡಲಾಗುವುದು. ಯಶಸ್ವಿ ಬಿಡ್‌ದಾರರು ಎರಡು ಕೆಲಸದ ದಿನಗಳಲ್ಲಿ ಒಟ್ಟು ಬಿಡ್ ಮೊತ್ತವನ್ನು ಡಿಡಿ ರೂಪದಲ್ಲಿ ಪಾವತಿಸಬೇಕು ಮತ್ತು 90 ದಿನಗಳಲ್ಲಿ ವಾಹನವನ್ನು ನೋಂದಾಯಿಸಿಕೊಳ್ಳಬೇಕು, ವಿಫಲವಾದರೆ ಬಿಡ್ಡಿಂಗ್ ಮೊತ್ತವನ್ನು ಮುಟ್ಟುಗೋಲು ಹಾಕಿಕೊಳ್ಳಲಾಗುತ್ತದೆ.

ಯುವ ಮಾಸ್ಟರ್‌ಸ್ಟ್ರೋಕ್: ಭಾರತದಾದ್ಯಂತ ಕ್ರಿಯಾಶೀಲತೆ ಮತ್ತು ಪ್ರತಿಭೆಗೆ ಪೋಷಣೆ

ಹುಬ್ಬಳ್ಳಿ: ನವನೀತ್ ಎಜುಕೇಶನ್ ಅಡಿಯಲ್ಲಿ ಯುವ ಸ್ಟೇಷನರಿಯು ದೇಶದ ವಿವಿಧ ರಾಜ್ಯಗಳಲ್ಲಿ ಹಮ್ಮಿಕೊಂಡಿದ್ದ 'ಯುವ ಮಾಸ್ಟರ್‌ಸ್ಟ್ರೋಕ್ 2023' ಅನ್ನು ಯಶಸ್ವಿಯಾಗಿ ಪೂರ್ತಿಗೊಳಿಸಿದ್ದನ್ನು ಹೆಮ್ಮೆಯಿಂದ ಘೋಷಿಸುತ್ತಿದೆ.ಚಿತ್ರಕಲೆಯ ಮೂಲಕ ವಿದ್ಯಾರ್ಥಿಗಳು ತಮ್ಮ ಕ್ರಿಯಾಶೀಲತೆಯನ್ನು ಅನಾವರಣಗೊಳಿಸಲು ಅವಕಾಶ ನೀಡುವ ಎಕ್ಸ್‌ಕ್ಲೂಸಿವ್ ವೇದಿಕೆ ಯುವ ಮಾಸ್ಟರ್ ಸ್ಟ್ರೋಕ್ ಆಗಿದೆ. ಎರಡು ದಶಕಗಳ ಇತಿಹಾಸವನ್ನು ಹೊಂದಿದ್ದು, ಈ ವರ್ಷ ಈ ಸ್ಪರ್ಧೆಯ 20ನೇ ವಾರ್ಷಿಕೋತ್ಸವವಾಗಿತ್ತು.

2023 ರ ಆವೃತ್ತಿಗೆ 22 ರಾಜ್ಯಗಳ ಒಟ್ಟು 5251 ಶಾಲೆಗಳು ಸ್ಪರ್ಧೆಯಲ್ಲಿ ಅತ್ಯಂತ ಉತ್ಸಾಹದಿಂದ ಭಾಗವಹಿಸಿದ್ದವು. ಸುಮಾರು 13.6 ಲಕ್ಷ ವಿದ್ಯಾರ್ಥಿಗಳು ತಮ್ಮ ಕಲಾಭಿವ್ಯಕ್ತಿಯನ್ನು ಅತ್ಯಂತ ಕ್ರಿಯಾಶೀಲವಾಗಿ ಮಾಡಿದ್ದಾರೆ. ಭಾಗವಹಿಸಿದವರನ್ನು ಮೂರು ವಂಯೋ ಸಮೂಹಗಳನ್ನಾಗಿ ವರ್ಗೀಕರಿಸಲಾಗಿತ್ತು ಮತ್ತು ಪ್ರತಿ ಸಮೂಹಕ್ಕೂ ಒಂದೊಂದು ಥೀಮ್‌ಗಳನ್ನು ನೀಡಲಾಗಿತ್ತು."ಯುವ ಮಾಸ್ಟರ್‌ಸ್ಟ್ರೋಕ್‌ನ ಇನ್ನೊಂದು ಯಶಸ್ವಿ ಆವೃತ್ತಿಯನ್ನು ನಾವು ಪೂರೈಸಿದ್ದೇವೆ. ದೇಶದ ವಿವಿಧ ರಾಜ್ಯಗಳಲ್ಲಿನ ವಿದ್ಯಾರ್ಥಿಗಳ ಕ್ರಿಯಾಶೀಲತೆ ಮತ್ತು ಪ್ರತಿಭೆಯನ್ನು ನಾವು ಈ ಮೂಲಕ ಸಾಬೀತುಪಡಿಸಿದ್ದೇವೆ" ಎಂದು ಯುವ ಮುಖ್ಯ ಕಾರ್ಯತಂತ್ರ ಅಧಿಕಾರಿ ಅಭಿಜಿತ್ ಸನ್ಯಾಲ್ ಹೇಳಿದ್ದಾರೆ. "ಯುವ ಕಲಾವಿದರು ತಮ್ಮ ಕೌಶಲವನ್ನು ಸಾಬೀತುಪಡಿಸಲು ಒಂದು ಅವಕಾಶ ನೀಡಿದ್ದಷ್ಟೇ ಅಲ್ಲ, ಕಲಾಭಿವ್ಯಕ್ತಿ ಮತ್ತು ಪ್ರೋತ್ಸಾಹದ ಸಂಸ್ಕೃತಿಯನ್ನೂ ಪೋಷಿಸುತ್ತದೆ. ಎಲ್ಲ ವಿಜೇತರಿಗೂ ಅಭಿನಂದನೆಗಳು" ಚಿತ್ರಕಲೆಯು ಅಭಿವ್ಯಕ್ತಿಯ ಸಾರ್ವಕಾಲಿಕ ಭಾಷೆಯಾಗಿದ್ದು, ವಿದ್ಯಾರ್ಥಿಗಳಿಗೆ ತಮ್ಮ ಚಿಂತನೆಗಳು ಮತ್ತು ಭಾವನೆಗಳನ್ನು ವ್ಯಕ್ತಪಡಿಸಲು, ತಮ್ಮ ಕಲಾತ್ಮಕ ಪ್ರತಿಭೆಯನ್ನು ಪೋಷಿಸಲು ವಿಶಿಷ್ಟ ಅವಕಾಶವನ್ನು ಒದಗಿಸುತ್ತದೆ. ಯುವ ಮಾಸ್ಟರ್‌ಸ್ಟ್ರೋಕ್ ಇದಕ್ಕೆ ಒಂದು ವಿಶಿಷ್ಟ ಅವಕಾಶವಾಗಿದೆ.

ಪಿಯುಸಿ ಫಲಿತಾಂಶದಲ್ಲಿ ವಿಜಯಪುರ 3 ನೇ ಸ್ಥಾನಕ್ಕೆ ಸಂಸದ ರಮೇಶ ಜಿಗಜಿಣಗಿ ಹರ್ಷ

ವಿಜಯಪುರ : ಈ ಬಾರಿಯ ದ್ವಿತೀಯ ಪಿಯುಸಿ ಫಲಿತಾಂಶದಲ್ಲಿ ಒಟ್ಟು ಶೇ.94.89% ಫಲಿತಾಂಶ ಪಡೆಯುವ ಮೂಲಕ ವಿಜಯಪುರ ಜಿಲ್ಲೆ ರಾಜ್ಯದಲ್ಲೇ ಟಾಪ್ ಮೂರನೇ ಸ್ಥಾನಕ್ಕೆ ಏರಿದ್ದು ಇಡಿ ಜಿಲ್ಲೆಯೇ ಹೆಮ್ಮೆ ಪಡುವ ಶೈಕ್ಷಣಿಕ ಸಾಧನೆಯಾಗಿದೆ. ಕಲಾ ವಿಭಾಗದಲ್ಲಿ ರಾಜ್ಯಕ್ಕೆ 1 ನೇ ರ್‍ಯಾಂಕ್ ಪಡೆದ ವೇದಾಂತ ನಾವಿ ಸೇರಿ ಜಿಲ್ಲೆಗೆ ಕೀರ್ತಿ ತಂದ ಎಲ್ಲಾ ಹೆಮ್ಮೆಯ ಸಾಧಕ ವಿದ್ಯಾರ್ಥಿಗಳಿಗೆ, ಶ್ರಮಿಸಿದ ಎಲ್ಲಾ ಶಿಕ್ಷಕ ಬಳಗ, ಪ್ರತಿಷ್ಠಿತ ಶಿಕ್ಷಣ ಸಂಸ್ಥೆಗಳಿಗೆ ವಿಜಯಪುರ ಸಂಸದ ರಮೇಶ ಜಿಗಜಿಣಗಿ ಹೃತ್ಪೂರ್ವಕ ಅಭಿನಂದನೆಗಳನ್ನು ಸಲ್ಲಿಸಿ ಸಾಧನೆಗೆ ಹರ್ಷ ವ್ಯಕ್ತಪಡಿಸಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಅವರು, ಪಿಯುಸಿ ಕಲಾ ವಿಭಾಗದಲ್ಲಿ ಜಿಲ್ಲೆಯ ವಿದ್ಯಾರ್ಥಿ ವೇದಾಂತ ನಾವಿ ರಾಜ್ಯಕ್ಕೆ ಪ್ರಥಮ ರ್‍ಯಾಂಕ್‌ಗಳಿಸಿರುವುದು ಇಡಿ ವಿಜಯಪುರಕ್ಕೆ ಹೆಮ್ಮೆಯ ಸಂಗತಿ. ಅಲ್ಲದೇ ಅವರಂತೆ ವಿವಿಧ ವಿಭಾಗಗಳಲ್ಲಿ ಜಿಲ್ಲೆಯ ಸಾಕಷ್ಟು ವಿದ್ಯಾರ್ಥಿಗಳು ಪರಿಶ್ರಮಪಟ್ಟು ಅತ್ಯುತ್ತಮ ಫಲಿತಾಂಶ ಪಡೆದು ಹೆತ್ತವರಿಗೆ, ಶಿಕ್ಷಕರಿಗೆ ಹಾಗೂ ಇಡಿ ಜಿಲ್ಲೆಗೆ ಕೀರ್ತಿ ತಂದಿದ್ದಾರೆ. ಅವರೆಲ್ಲರಿಗೂ ಹಾರ್ದಿಕ ಅಭಿನಂದನೆಗಳು. ಹಾಗೇ ಉತ್ತಮ ಫಲಿತಾಂಶ ಪಡೆಯಲಾಗದ, ವಿಫಲಗೊಂಡ ವಿದ್ಯಾರ್ಥಿಗಳು ಧೈರ್ಯಗೆಡದೇ ಸೋಲನ್ನು ಸವಾಲಾಗಿ ಸ್ವೀಕರಿಸಿ, ಮರಳಿ ಯತ್ನ ಮಾಡುವ ಛಲವಿರಲಿ. ಅನುತ್ತೀರ್ಣತೆ ಎಂದರೆ ಸೋಲಲ್ಲ. ಗೆಲುವಿನ ದಾರಿಯಲ್ಲಿ ಸಾಗುವಾಗ ಕಾಲಿಗೆ ಸಿಕ್ಕ ಕಲ್ಲು ಎಂಬ ಭಾವನೆ ವಿದ್ಯಾರ್ಥಿಗಳಲ್ಲಿ ಮೂಡಬೇಕು. ಅನುತ್ತೀರ್ಣ ವಿದ್ಯಾರ್ಥಿಗಳನ್ನು ಅವರ ಪೋಷಕರೊಂದಿಗೆ ಶಿಕ್ಷಕರು ಸಮಾಲೋಚನೆ ನಡೆಸಿ, ಸೋಲನ್ನು ಸವಾಲಾಗಿ ಸ್ವೀಕರಿಸಿ ಭವಿಷ್ಯದಲ್ಲಿ ಸಾಗಬೇಕಾದ ಹಾದಿಯ ಪರಿಚಯವನ್ನು ಮಾಡಿಕೊಡಬೇಕು ಎಂದು ಸಂಸದ ರಮೇಶ ಜಿಗಜಿಣಗಿ ವಿದ್ಯಾರ್ಥಿಗಳ ಪೋಷಕರಿಗೆ ಹಾಗೂ ಶಿಕ್ಷಕರಿಗೆ ಇದೇ ವೇಳೆ ಮನವಿ ಮಾಡಿಕೊಂಡಿದ್ದಾರೆ.

ಏಪ್ರಿಲ್ 13 ರಂದು ಶ್ರೀ ದೇವರ ದಾಸಿಮಯ್ಯ ಜಯಂತಿ

ಧಾರವಾಡ ಏಪ್ರಿಲ್ 10 : ಜಿಲ್ಲಾಡಳಿತ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದಲ್ಲಿ ಏಪ್ರಿಲ್ 13, 2024 ರಂದು ಬೆಳಗ್ಗೆ 11 ಗಂಟೆಗೆ ಜಿಲ್ಲಾಧಿಕಾರಿಗಳ ಕಚೇರಿಯ ನೂತನ ಸಭಾಭವನದಲ್ಲಿ ಶ್ರೀ ದೇವರ ದಾಸಿಮಯ್ಯ ಜಯಂತಿಯನ್ನು ಏರ್ಪಡಿಸಲಾಗಿದೆ. ಲೋಕಸಭಾ ಚುನಾವಣೆಯ ನೀತಿ ಸಂಹಿತೆ ಜಾರಿಯಲ್ಲಿ ಇರುವ ಹಿನ್ನಲೆಯಲ್ಲಿ ದೇವರ ದಾಸಿಮಯ್ಯ ಜಯಂತಿ ಕಾರ್ಯಕ್ರಮವನ್ನು ಸರಳವಾಗಿ ಆಚರಿಸಲಾಗುವುದು. ಕಾರ್ಯಕ್ರಮಕ್ಕೆ ಜಿಲ್ಲಾಮಟ್ಟದ ಅಧಿಕಾರಿಗಳು, ಸಾರ್ವಜನಕರು ಆಗಮಿಸಬೇಕೆಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಈ ವರ್ಷ ಸಾಮಾನ್ಯ ಮುಂಗಾರು: ಕರ್ನಾಟಕದಲ್ಲಿ ವ್ಯಾಪಕ ಮಳೆ ನಿರೀಕ್ಷೆ

ನವದೆಹಲಿ: ಯುಗಾದಿ ಹಬ್ಬದ ಆಚರಣೆ ಬೆನ್ನಲ್ಲೇ ಖಾಸಗಿ ಹವಾಮಾನ ಸಂಸ್ಥೆ ಸ್ಕೈಮೆಟ್ ಹಾಲಿ ವರ್ಷದ ಹವಾಮಾನ ವರದಿ ನೀಡಿದ್ದು, ಈ ಬಾರಿ ಭಾರತದಲ್ಲಿ ಸಾಮಾನ್ಯ ಮುಂಗಾರು ಮಳೆಯಾಗಲಿದೆ ಎಂದು ವರದಿ ಮಾಡಿದೆ.

ಈ ವರ್ಷ ಜೂನ್ ಮತ್ತು ಸೆಪ್ಟೆಂಬರ್ ನಡುವೆ ಭಾರತವು 'ಸಾಮಾನ್ಯ' ಮಾನ್ಸೂನ್ (ಒಠಛಿಠಿಠಟಿ) ಅನ್ನು ಅನುಭವಿಸುವ ನಿರೀಕ್ಷೆ ಇದೆ. ಮುಂಗಾರು ಮಳೆ ಶೇಕಡಾ 102ರಷ್ಟು ಆಗುವ ನಿರೀಕ್ಷೆಯಿದೆ. ಜೂನ್‌ನಿಂದ ಸೆಪ್ಟೆಂಬರ್ ವರೆಗೆ, ಮಧ್ಯ ಮತ್ತು ಪಶ್ಚಿಮ ಭಾಗಗಳಲ್ಲಿ ವಾಡಿಕೆಗಿಂತ ಹೆಚ್ಚಿನ ಮಳೆಯಾಗಲಿದೆ.

ಉತ್ತರ ಮತ್ತು ದಕ್ಷಿಣ ಭಾಗಗಳಲ್ಲಿ ಸಾಮಾನ್ಯ ಮಳೆಯಾಗಲಿದೆ. ಈಶಾನ್ಯ ಭಾರತ ಮತ್ತು ಪೂರ್ವ ಭಾಗಗಳಲ್ಲಿ ವಾಡಿಕೆಗಿಂತ ಕಡಿಮೆ ಮಳೆಯಾಗಲಿದೆ ಎಂದು ಖಾಸಗಿ ಹವಾಮಾನ ಮುನ್ಸೂಚನೆ ಸಂಸ್ಥೆ ಸ್ಕೈಮೆಟ್ (ಖಇಥಿಟಜಣ) ಮಂಗಳವಾರ ತನ್ನ ವರದಿಯಲ್ಲಿ ತಿಳಿಸಿದೆ.

'ಮಾನ್ಸೂನ್ ಮುನ್ಸೂಚನೆ 2024' ವರದಿಯು ದೇಶದ ದಕ್ಷಿಣ, ಪಶ್ಚಿಮ ಮತ್ತು ವಾಯುವ್ಯ ಪ್ರದೇಶಗಳಲ್ಲಿ ಅನುಕೂಲಕರವಾದ ಮಳೆಯಾಗಲಿದೆ ಎಂದು ಸೂಚಿಸಿದೆ. ಮಳೆಯಾಶ್ರಿತ ಪ್ರದೇಶಗಳಾದ ಮಹಾರಾಷ್ಟ್ರ ಮತ್ತು ಮಧ್ಯಪ್ರದೇಶದಲ್ಲಿ ಸಾಕಷ್ಟು ಮಳೆಯಾಗುವ ನಿರೀಕ್ಷೆಯಿದೆ. ಆದರೆ ಬಿಹಾರ, ಜಾರ್ಖಂಡ್, ಒಡಿಶಾ ಮತ್ತು ಪಶ್ಚಿಮ ಬಂಗಾಳ ಸೇರಿದಂತೆ ಪೂರ್ವ ರಾಜ್ಯಗಳು ಗರಿಷ್ಠ ಮಾನ್ಸೂನ್ ತಿಂಗಳುಗಳಲ್ಲಿ ಮಳೆ ಕೊರತೆ ಅಪಾಯ ಎದುರಿಸಲಿವೆ.

ವರದಿಯ ಪ್ರಕಾರ, ಜೂನ್‌ನಿಂದ ಸೆಪ್ಟೆಂಬರ್‌ವರೆಗಿನ ಮಾನ್ಸೂನ್ ಸಂಭವನೀಯತೆಯು ಅಧಿಕ ಮಳೆಯಾಗುವ ಸಾಧ್ಯತೆಯನ್ನು 10 ಪ್ರತಿಶತ, ಸಾಮಾನ್ಯ ಮಳೆಯ 45 ಪ್ರತಿಶತ ಸಾಧ್ಯತೆಯನ್ನು ಸೂಚಿಸಿದೆ. ಜೊತೆಗೆ 20 ಪ್ರತಿಶತದಷ್ಟು ಸಾಮಾನ್ಯ-ಹೆಚ್ಚು ಮಳೆ, 15 ಪ್ರತಿಶತ ಕಡಿಮೆ-ಸಾಮಾನ್ಯ ಮಳೆ, ಮತ್ತು ಶೇ.10 ರಷ್ಟು ಬರ ಪರಿಸ್ಥಿತಿಯ ಸಾಧ್ಯತೆ ಇದೆ ಎಂದು ಊಹಿಸಿದೆ.

ಮಾಸಿಕ ಪ್ರಮಾಣದಲ್ಲಿ, ಜೂನ್ 95%, ಜುಲೈ 105%, ಆಗಸ್ಟ್ 98% ಮತ್ತು ಸೆಪ್ಟೆಂಬರ್ 110 ಸರಾಸರಿ ಮಳೆಯನ್ನು ಪಡೆಯುವ ಮುನ್ಸೂಚನೆ ಇದೆ. ಹವಾಮಾನ ಸವಾಲುಗಳ ಹೊರತಾಗಿಯೂ, ವರದಿಯು ಈ ವರ್ಷ ಸಾಮಾನ್ಯ ಮಾನ್ಸೂನ್ ಋತುವನ್ನು ಊಹಿಸಿದೆ.

ಕರ್ನಾಟಕ, ಕೇರಳ, ತಮಿಳುನಾಡಿನಲ್ಲಿ ವಾಡಿಕೆಗಿಂತ ಹೆಚ್ಚಿನ ಮಳೆ

ಈಶಾನ್ಯ ಭಾರತವು ಋತುವಿನ ಮೊದಲಾರ್ಧದಲ್ಲಿ ಸಾಮಾನ್ಯಕ್ಕಿಂತ ಕಡಿಮೆ ಮಳೆಯನ್ನು ಅನುಭವಿಸಬಹುದು. ಕೇರಳ, ತಮಿಳುನಾಡು, ಕರ್ನಾಟಕ ಮತ್ತು ಗೋವಾದಲ್ಲಿ ವಾಡಿಕೆಗಿಂತ ಹೆಚ್ಚಿನ ಮಳೆಯಾಗಲಿದೆ ಮತ್ತು ಕೇಂದ್ರ ಭಾಗಗಳಲ್ಲಿ ಸಾಮಾನ್ಯ ಮಳೆಯಾಗಲಿದೆ ಎಂದು ಸ್ಕೈಮೆಟ್ ತಿಳಿಸಿದೆ.

ಈ ಕುರಿತು ಮಾತನಾಡಿರುವ ಸ್ಕೈಮೆಟ್‌ನ ಒಆ ಜತಿನ್ ಸಿಂಗ್, 'ಸೂಪರ್ ಎಲ್ ನಿನೋದಿಂದ ಬಲವಾದ ಲಾ ನಿನಾಕ್ಕೆ ಗಮನಾರ್ಹ ಪರಿವರ್ತನೆಯಾಗಲಿದ್ದು, ಐತಿಹಾಸಿಕವಾಗಿ ಹೆಚ್ಚಿನ ಮಾನ್ಸೂನ್ ಅನ್ನು ಉಂಟಾಗಿಸಲಿದೆ. ಆದರೆ ಮಾನ್ಸೂನ್ ಅವಧಿಯು ದುರ್ಬಲವಾಗಿ ಪ್ರಾರಂಭವಾಗಬಹುದು. ಇದು ಎಲ್ ನಿನೊದ ಪಶ್ಚಾತ್ ಪರಿಣಾಮ. ಮಾನ್ಸೂನ್ ಋತುವಿನ ದ್ವಿತೀಯಾರ್ಧವು ಪ್ರಾಥಮಿಕ ಹಂತಕ್ಕಿಂತ ವಿಪರೀತವಾಗಿ ಇರಬಹುದು ಎಂದು ಹೇಳಿದರು.

ಕಳೆದ ವರ್ಷ ಮಾನ್ಸೂನ್ ಮೇಲೆ ಗಂಭೀರ ಪರಿಣಾಮ ಬೀರಿದ್ದ ಎಲ್ ನಿನೋ ಈ ಬಾರಿಯೂ ಮಾನ್ಸೂನ್ ಮೇಲೆ ಪರಿಣಾಮ ಬೀರಲಿದೆ ಎಂದು ಸ್ಕೈಮೆಟ್ ವರದಿಯಲ್ಲಿ ಉಲ್ಲೇಖಿಸಲಾಗಿದೆ. ಎಲ್ ನಿನೊದ ದಕ್ಷಿಣ ಕಂಪನ, ಹಿಂದೂ ಮಹಾಸಾಗರದ ಡೈಪೋಲ್‌ನಂತಹ ಇತರ ಅಂಶಗಳು ಮಾನ್ಸೂನ್ ಮೇಲೆ ಪ್ರಭಾವ ಬೀರುತ್ತವೆ.

ದ್ವಿಧ್ರುವಿ ಅಥವಾ ಡೈಪೋಲ್ ಧನಾತ್ಮಕವಾಗಿದ್ದು, ಇದು ಲಾ ನಿನಾಗೆ ಪೂರಕವಾಗಿದೆ ಎಂದು ನಿರೀಕ್ಷಿಸಲಾಗಿದೆ. ಇದು ಉತ್ತಮ ಮಾನ್ಸೂನ್ ಭವಿಷ್ಯವನ್ನು ಹೆಚ್ಚಿಸಲಿದೆ. ಎಲ್ ನಿನೊದಿಂದ ಲಾ ನಿನಾಗೆ ತ್ವರಿತ ಪರಿವರ್ತನೆಯು ಋತುವಿನ ಆರಂಭದಲ್ಲಿ ಸ್ವಲ್ಪ ಅಡ್ಡಿಪಡಿಸಲಿದೆ. ಹೀಗಾಗಿ ಋತುವಿನ ಉದ್ದಕ್ಕೂ ಮಳೆಯ ವಿತರಣೆಯು ಅಸಮವಾಗಿರಬಹುದು ಎಂದು ಹೇಳಲಾಗಿದೆ.

ನಮ್ಮ ಯೋಜನೆ, ನಾವು ಮಾಡಿದ ಅಭಿವೃದ್ಧಿಗೆ ಜನ ಜೈ ಅಂದಿದ್ದಾರೆ; ಕ್ಷೇತ್ರಾದ್ಯಂತ ಉತ್ತಮ ಜನ ಬೆಂಬಲ - ಸಚಿವೆ ಲಕ್ಷ್ಮೀ ಹೆಬ್ಬಾಳಕರ್

ಬೆಳಗಾವಿ: ರಾಜ್ಯ ಮತ್ತು ರಾಷ್ಟ್ರದಲ್ಲಿ ಕಾಂಗ್ರೆಸ್ ಮಾಡಿದ ಸಾಧನೆ, ಜಾರಿಗೆ ತಂದಿರುವ ವಿವಿಧ ಯೋಜನೆ ಮತ್ತು